ಕರ್ನಾಟಕ ವಿಧಾನ ಸಭೆ

KARNATAKA LEGISLATIVE ASSEMBLY

ಸೋಮವಾರ, ದಿನಾಂಕ ೨ನೇ ಜುಲೈ ೧೯೯೦, ಆಷಾಢ ೧೧, ೧೯೧೨ ಶಕ.

ಸದನವು ವಿಧಾನ ಸೌಧದಲ್ಲಿರುವ ವಿಧಾನ ಸಭೆಯ ಸಭಾಂಗಣದಲ್ಲಿ ಬೆಳಿಗ್ಗೆ ೧೧ ಘಂಟೆ ೧೫ ನಿಮಿಷಕ್ಕೆ ಸಮಾವೇಶಗೊಂಡಿತು.

[ಅಧ್ಯಕ್ಷರು (ಶ್ರೀ ಎಸ್. ಎಂ. ಕೃಷ್ಣ) ಅವರು ಪೀಠವನ್ನು ಅಲಂಕರಿಸಿದರು.]

ಸಂತಾಪ ಸೂಚಕ ನಿರ್ಣಯ

ಅಧ್ಯಕ್ಷರು.—ವಿಧಾನಸಭೆಯ ಮಾಜಿ ಸದಸ್ಯರಾದ ಶ್ರೀ ಎ. ಎಸ್. ಪಾಟೀಲ್‌ರವರು ದಿನಾಂಕ ೭ನೇ ಜೂನ್ ೧೯೯೦ರಂದು ನಿಧನರಾದರೆಂದು ಸದನಕ್ಕೆ ತಿಳಿಸಲು ವಿಷಾದಿಸುತ್ತೇನೆ. ಮಾನ್ಯರು, ಮೊದಲನೇ, ಎರಡನೇ ಮತ್ತು ಮೂರನೇ ವಿಧಾನ ಸಭೆಗೆ ನವಲಗುಂದ ಕ್ಷೇತ್ರದಿಂದ ಆಯ್ಕೆಯಾಗಿ ಸೇವೆ ಸಲ್ಲಿಸಿರುತ್ತಾರೆ. ಶ್ರೀಯುತರು ಸಹಕಾರಿ ಚಳುವಳಿಯಲ್ಲಿ ಸಕ್ರಿಯ ಪಾತ್ರ ವಹಿಸಿದ್ದರು. ವಿಧಾನ ಸಭೆಯ ಅಂದಾಜು ಸಮಿತಿಯ ಅಧ್ಯಕ್ಷರಾಗಿ ಕಾರ್ಯವನ್ನು ನಿರ್ವಹಿಸಿರುತ್ತಾರೆ. ಮೃತರ ಗೌರವಾರ್ಥ ಮಾನ್ಯ ಸದಸ್ಯರು ಎದ್ದುನಿಂತು ಒಂದು ನಿಮಿಷ ಮೌನವನ್ನಾಚರಿಸಬೇಕಾಗಿ ಕೇಳಿಕೊಳ್ಳುತ್ತೇನೆ.

(ಸಭೆಯು, ಮೃತರ ಗೌರವಾರ್ಥ ಒಂದು ನಿಮಿಷ ಕಾಲ ಎದ್ದುನಿಂತು ಮೌನವನ್ನಾಚರಿಸಿತು.)

ಮೃತರ ಕುಟುಂಬದವರಿಗೆ, ಸಭೆಯ ಸಂತಾಪಸೂಚಕ ನಿರ್ಣಯವನ್ನು ಕಳುಹಿಸಿಕೊಡಲಾಗುವುದು. ಈಗ ಪ್ರಶ್ನೋತ್ತರಗಳು.

ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಬಾಯಿಮಾತಿನ ಮೂಲಕ ನೀಡಲಾದ ಉತ್ತರಗಳು

ಹುಬ್ಬಳ್ಳಿ ನಗರದ ಮಧ್ಯೆ ಹರಿಯುವ ನಾಲೆ

೧೨೧೬. ಶ್ರೀ ಗೋಪಿನಾಥ ಆರ್ ಸಾಂಡ್ರೆ (ಹುಬ್ಬಳ್ಳಿ-ಗ್ರಾಮಾಂತರ).—ಮಾನ್ಯ ಬಂದರು, ಮೀನುಗಾರಿಕೆ, ವಸತಿ ಮತ್ತು ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.—

ಅ) ಹುಬ್ಬಳ್ಳಿ ನಗರದ ಮಧ್ಯೆ ಹರಿಯುವ ನಾಲಾ ಪ್ರತಿ ವರ್ಷ ಮಳೆಗಾಲದಲ್ಲಿ ತುಂಬಿ ಹರಿಯುವುದರಿಂದ ಸಾವು ನೋವು ಸಂಭವಿಸಿ ಆಸ್ತಿ ಪಾಸ್ತಿಗಳಿಗೆ ಹಾನಿ ಉಂಟಾಗುತ್ತಿರುವುದು ಸರಕಾರದ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರಕಾರವು ಕೈಕೊಳ್ಳಲು ಉದ್ದೇಶಿಸಿರುವ ಪರಿಹಾರೋಪಾಯಗಳೇನು?

ಶ್ರೀ ಟಿ.ಎನ್. ನರಸಿಂಹಮೂರ್ತಿ (ಬಂದರು, ಮೀನುಗಾರಿಕೆ, ವಸತಿ ಮತ್ತು ನಗರಾಭಿವೃದ್ಧಿ ಸಚಿವರು).—

ಅ) ಹೌದು.